ಪ್ರಜಾವಾಣಿ

ವಾಣಿಜ್ಯ

ಬೆಂಗಳೂರು

# ಆನ್‌ಲೈನ್ ಕೃಷಿ ಮಾರುಕಟ್ಟೆ ವ್ಯವಸ್ಥೆ ಆಂಧ್ರದಲ್ಲೂ ಜಾರಿ

**ಪ್ರಜಾವಾಣಿ ವಾರ್ತೆ**

12 Nov, 2014

ರಾಜ್ಯದಲ್ಲಿನ ಕೃಷಿ ಉತ್ಪನ್ನಗಳ ಆನ್‌ಲೈನ್ ಮಾರಾಟ ವ್ಯವಸ್ಥೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿರುವ ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ತಮ್ಮ ರಾಜ್ಯದಲ್ಲೂ ಅದನ್ನು ಅನುಷ್ಠಾನಗೊಳಿಸುವುದಾಗಿ ಹೇಳಿದರು.

**ಬೆಂಗಳೂರು:** ರಾಜ್ಯದಲ್ಲಿನ ಕೃಷಿ ಉತ್ಪನ್ನಗಳ ಆನ್‌ಲೈನ್ ಮಾರಾಟ ವ್ಯವಸ್ಥೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿರುವ ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ತಮ್ಮ ರಾಜ್ಯದಲ್ಲೂ ಅದನ್ನು ಅನುಷ್ಠಾನಗೊಳಿಸುವುದಾಗಿ ಹೇಳಿದರು.

ಖಾಸಗಿ ಹೋಟೆಲ್‌ನಲ್ಲಿ ಸೋಮವಾರ ಆಯೋಜಿಸಿದ್ದ ಸಮಾರಂಭದಲ್ಲಿ ರಾಜ್ಯದ ರೈತರ ಸಲುವಾಗಿ ಕೃಷಿ ಇಲಾಖೆ ಹಮ್ಮಿಕೊಂಡಿರುವ ವಿವಿಧ ಯೋಜನೆ ಹಾಗೂ ಆನ್‌ಲೈನ್ ವ್ಯವಸ್ಥೆ ಬಗ್ಗೆ ಅವರಿಗೆ ಮಾಹಿತಿ ನೀಡಲಾಯಿತು.

ಕೃಷಿ ಸಚಿವ ಕೃಷ್ಣಬೈರೇಗೌಡ ಅವರು ಕೃಷಿ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.

ಆನ್‌ಲೈನ್ ಕೃಷಿ ಮಾರಕಟ್ಟೆ ವ್ಯವಸ್ಥೆ ಕುರಿತು ಸಹಕಾರ ಇಲಾಖೆ ಹೆಚ್ಚುವರಿ ಕಾರ್ಯದರ್ಶಿ ಆರ್.ಮನೋಜ್ ವಿವರಿಸಿದರು.

ತಿಪಟೂರು ಮತ್ತು ಅರಸೀಕೆರೆ ಮಾರುಕಟ್ಟೆಗಳಲ್ಲಿ ಕಳೆದ 9 ತಿಂಗಳಲ್ಲಿ ಆನ್‌ಲೈನ್ ವ್ಯವಸ್ಥೆಯಿಂದ ರೈತರಿಗೆ ಆಗಿರುವ ಅನುಕೂಲಗಳ ಬಗ್ಗೆ ಅವರು ಮಾಹಿತಿ ನೀಡಿದರು. ಪ್ರಾತ್ಯಕ್ಷಿಕೆ ನೋಡಿ  ಆಶ್ಚರ್ಯ ವ್ಯಕ್ತಪಡಿಸಿದ ಅವರು ಇದು ರೈತರಿಗೆ ಅನುಕೂಲ ಆಗುವ ಯೋಜನೆ. ಖಂಡಿತ ಇದನ್ನು ಆಂಧ್ರಪ್ರದೇಶದಲ್ಲೂ ಜಾರಿ ಮಾಡುತ್ತೇವೆ. ಇದಕ್ಕೆ ಅಗತ್ಯ ನೆರವು ನೀಡಬೇಕು ಎಂದು ಮನವಿ ಮಾಡಿದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ಕೌಶಿಕ್ ಮುಖರ್ಜಿ ಅವರು ಪೂರ್ಣ ಸಹಕಾರ ನೀಡುವುದಾಗಿ ಹೇಳಿದರು.
ಅಭಿವೃದ್ಧಿ ಆಯುಕ್ತರಾದ ಲತಾ ಕೃಷ್ಣರಾವ್, ಕೃಷಿ ಇಲಾಖೆ ಪ್ರಧಾನ ಕಾರ್ಯದರ್ಶಿ ಭರತ್‌ಲಾಲ್ ಮೀನಾ, ಸಹಕಾರ ಇಲಾಖೆ ಪ್ರಧಾನ ಕಾರ್ಯದರ್ಶಿ ಮಹೇಂದ್ರ ಜೈನ್ ಮತ್ತಿತರರು ಈ ಸಂದರ್ಭದಲ್ಲಿ ಹಾಜರಿದ್ದರು.